ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಯಲಹಂಕ ವಲಯ

ಸಂಖ್ಯೆ: ಬಿಬಿಎಂಪಿ/ಉ.ಆ/ಯ.ವ/ಆ.ಅ/ 78/11-12

ಉಪ ಆಯುಕ್ತ ರವರ ಕಛೇರಿ
ಯಲಹಂಕ ವಲಯ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
ಬಳ್ಳಾರಿ ರಸ್ತೆ, ಬೆಂಗಳೂರು-92.
ದಿನಾಂಕ:

ಆಡಳಿತಾತ್ಮಕ ಅನುಮೋದನೆ

ವಿಷಯ:- Construction of 2nd Floor Samudaya Bhavana at Maruthi Nagar at in Ward No.08, Kodigehalli Sub Division.
Est.Amount:19.81Lakhs.

ಉಲ್ಲೇಖ:-ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ ಕಾಮಗಾರಿ ಸಂಕೇತ: 008-11-000053

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ) ವಿಭಾಗ ರವರು 2010-11ನೇ ಸಾಲಿನ ಕೆ.ಪಿ.ಡಬ್ಲ್ಯೂ.ಡಿ ಎಸ್.ಆರ್. ದರ ಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಯಲಹಂಕ ವಲಯಕ್ಕೆ 2010-11ನೇ ಹೆಚ್ಚುವರಿ ಅನುದಾನದಡಿಯಲ್ಲಿ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು ರೂ:19.81 ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಮಾನ್ಯ ಆಯುಕ್ತರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ವಿ.ಆ/ಯೋಜನೆ/ಪಿ.ಆರ್/3008/09-10 ದಿನಾಂಕ:25.01.2010 ರಂತೆ ನೀಡಿರುವ ಅಧಿಕಾರದನ್ವಯ ಆಡಳಿತಾತ್ಮಕ ಅನುಮೋದನೆ ಪುಸ್ತಕದ ಪುಟ ಸಂಖ್ಯೆ: 24 ಕ್ರಮ ಸಂಖ್ಯೆ: 78 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

01. ಅಂದಾಜು ಪಟ್ಟಿಯಮೊತ್ತ ರೂ.2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
02. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History Book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧ ಗೊಳಿಸುವುದು.
03. ದರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡ್ಯಾಟಾ ದರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
04. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಆಳವಡಿಸಿಕೊಂಡಿರುವ ಅಂಶಗಳಿಗೆ ಕೋಟೇಷನ್ ಕರೆದು ಅನುಮೋದನೆ ಪಡೆಯುವುದು.
05. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
06. ಆರ್.ಸಿ.ಸಿ. ಡೆಕ್ ಸ್ಲಾಬ್, ಹರಿನೀರು ಮೋರಿಯ ಅಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
07. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನಡಿಯಲ್ಲಿ ಭರಿಸುವುದು.
08. ಬಿ.ಎಂ./ಬಿ.ಸಿ ಅಳವಡಿಸಿ ಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದು ಕೊಳ್ಳುವುದು.
09. ಸದರಿ ಕೆಲಸವು ಎಂಬ್ಯಾಕ್‌ಮೆಂಟ್/ಕಾಂಕೀಟ್/ಡಾಂಬರೀಕರಣ-ಬಿಎಂ-ಬಿಸಿ/WMM/WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದು ಕೊಳ್ಳುವುದು.

ಉಪ ಆಯುಕ್ತರು
ಯಲಹಂಕ ವಲಯ

ಪ್ರತಿಯನ್ನು:

01. ಅಧೀಕ್ಷಕ ಅಭಿಯಂತರರು, ಯಲಹಂಕ ವಲಯ ರವರ ಮಾಹಿತಿಗಾಗಿ ಸಲ್ಲಿಸಿದೆ.
02. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ರವರ ಮಾಹಿತಿಗಾಗಿ.
03. ಮುಖ್ಯ ಲೆಕ್ಕಾಧಿಕಾರಿಗಳು, ಬಿಬಿಎಂಪಿ ರವರ ಮಾಹಿತಿಗಾಗಿ.